# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 920(1029)
2. ಸದಸ್ಯರ ಹೆಸರು : ಡಾ|| ಕೆ. ಗೋವಿಂದರಾಜ್ (ವಿಧಾನಸಭಾ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 16.12.2025
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲಿನ ಒತ್ತಡ ತಗ್ಗಿಸಲು ಬೆಂಗಳೂರಿನಲ್ಲಿ ಎರಡನೇ ವಿಮಾನ ನಿಲ್ದಾಣ ಸ್ಥಾಪಿಸಬೇಕೆಂಬ ನಿರ್ಧಾರ ಕೈಗೊಂಡು ಹಲವು ತಿಂಗಳುಗಳೇ ಕಳೆದಿದ್ದರೂ ಸ್ಥಳ ಮಾತ್ರ ಅಂತಿಮಗೊಂಡಿಲ್ಲದಿರುವುದಕ್ಕೆ ಕಾರಣಗಳೇನು; ಯಾವಾಗ ಸ್ಥಳವನ್ನು ಅಂತಿಮಗೊಳಿಸಲಾಗುತ್ತದೆ; | ಬೆಂಗಳೂರಿನಲ್ಲಿ 2ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಅಭಿವೃದ್ಧಿಗೆ 3 ಸ್ಥಳಗಳನ್ನು ಗುರುತಿಸಲಾಗಿರುತ್ತದೆ. ಗುರುತಿಸಲಾದ ಮೂರು ಸ್ಥಳಗಳನ್ನು Airport Authority of India (AAI) ಸಂಸ್ಥೆಯ ತಾಂತ್ರಿಕ ತಂಡವು ದಿನಾಂಕ:07.04.2025 ರಿಂದ 09.04.2025 ವರೆಗೆ ಪರಿವೀಕ್ಷಣೆಯನ್ನು ಕೈಗೊಂಡಿದ್ದು, ಕೇಂದ್ರ ಸರ್ಕಾರದ ನಾಗರಿಕ ವಿಮಾನಯಾನ ಸಚಿವಾಲಯದಿಂದ ಪೂರ್ವ ಕಾರ್ಯಸಾಧ್ಯತಾ ವರದಿಯು ದಿನಾಂಕ:28.10.2025 ರಂದು ಸ್ವೀಕೃತ ವಾಗಿರುತ್ತದೆ.<br><br>ಪ್ರಸ್ತುತ ಕಾರ್ಯಸಾಧ್ಯತಾ ವರದಿಯನ್ನು ತಯಾರಿಸುವ ಸಮಾಲೋಚಕರನ್ನು ಆಯ್ಕೆ ಮಾಡಲು ಟೆಂಡರ್‌ನ್ನು ಆಹ್ವಾನಿಸಲಾಗಿದೆ. |
| (ಆ) | ಎರಡನೇ ವಿಮಾನ ನಿಲ್ದಾಣ ಸ್ಥಾಪಿಸಲು ಬೇಕಾಗುವ ಜಮೀನು ಎಷ್ಟು; ಯೋಜನಾ ವೆಚ್ಚ. ವೆಚ್ಚ ಭರಿಸುವ ವಿಧಾನ, ಭೂ ಸ್ವಾಧೀನ ವಿಧಾನ ಮುಂತಾದವುಗಳ ಬಗ್ಗೆ ವಿವರಗಳನ್ನು ನೀಡುವುದು; | ಬೆಂಗಳೂರಿನಲ್ಲಿ 2ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸುಮಾರು 4500 ಸಾವಿರ ಎಕರೆ ಜಮೀನಿನ ಅವಶ್ಯಕತೆ ಇರುವುದಾಗಿ ಅಂದಾಜಿಸಲಾಗಿರುತ್ತದೆ. ಆದರೆ ವಿಮಾನ ನಿಲ್ದಾಣಕ್ಕೆ ಗುರುತಿಸಿರುವ ಪ್ರದೇಶಗಳಲ್ಲಿ ಸರ್ಕಾರಿ ಮತ್ತು ಖಾಸಗಿ ಜಮೀನುಗಳ ಭೂಸ್ವಾಧೀನ ಸರ್ವೆ ಕಾರ್ಯವನ್ನು ಕೈಗೊಂಡಿರುವುದಿಲ್ಲ.. ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಗೊಂಡ ನಂತರದಲ್ಲಿ ಸದರಿ ವಿವರಗಳು ಲಭ್ಯವಾಗುತ್ತವೆ. |
| (ಇ) | ಎರಡನೇ ವಿಮಾನ ನಿಲ್ದಾಣ ಸ್ಥಾಪನೆಯ ಬಗ್ಗೆ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದ ಶಿಫಾರಸ್ಸುಗಳೇನು; ಈ ಶಿಫಾರಸ್ಸುಗಳ ಮೇಲೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ಪ್ರಸ್ತಾವಿತ ವಿಮಾನ ನಿಲ್ದಾಣಕ್ಕೆ ಗುರುತಿಸಿರುವ ಪ್ರದೇಶಗಳಲ್ಲಿ ಏರಿಳಿತದಿಂದ ಕೂಡಿದ ಗುಡ್ಡಗಳು ಇರುವುದರಿಂದ ವಿಮಾನ ನಿಲ್ದಾಣದ ನಿರ್ಮಾಣ ವೆಚ್ಚವು ಹೆಚ್ಚಾಗುವ ಸಾಧ್ಯತೆ ಇದೆ. ಅಲ್ಲದೆ, ಪ್ರಸ್ತಾವಿತ ವಿಮಾನ ನಿಲ್ದಾಣದ ಸಮೀಪದಲ್ಲಿ HAL, BIAL ಹಾಗೂ ಇತರ ವಿಮಾನ ನಿಲ್ದಾಣಗಳಿರುವುದರಿಂದ ನಿರ್ಬಂಧಿತ ವಾಯುಪ್ರದೇಶವಾಗಿದ್ದು, ಉಪಕರಣ ಹಾರಾಟ ಕಾರ್ಯವಿಧಾನ (Instrument Flight Procedure -IFP)ಗಳ ಮೂಲಕ ಸುರಕ್ಷಿತವಾಗಿ ಕಾರ್ಯನಿರ್ವಹಿಸಲು ಅಗತ್ಯವಿರುವ ನಿಯಂತ್ರಿತ ವಾಯುಪ್ರದೇಶವನ್ನು ನಿರ್ಧರಿಸಬೇಕಾಗಿರುತ್ತದೆ.<br><br>ಇದಲ್ಲದೆ, ಪ್ರಸ್ತಾವಿತ ವಿಮಾನ ನಿಲ್ದಾಣದ ಸುತ್ತಮುತ್ತಲಿನ ಪ್ರದೇಶವು ಬೆಟ್ಟಗಳಿಂದ ಸುತ್ತುವರೆದಿರುವುದರಿಂದ ಹಾಗೂ ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನವಿರುವುದರಿಂದ ಶಬ್ದ ಮಾಲಿನ್ಯ ಅಧ್ಯಯನ, OLS (Obstacle Limitation Surfaces) |

| | | |
|---|---|---|
| | | ಸರ್ವೇ ಹಾಗೂ IFP ಅಧ್ಯಯನಗಳನ್ನು ಕೈಗೊಂಡ ಮುಂದಿನ ಕ್ರಮಗಳನ್ನು ತೆಗೆದುಕೊಳ್ಳಬಹುದಾಗಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ.<br><br>ಆದುದರಿಂದ, ಗುರುತಿಸಿರುವ ಸದರಿ ಸ್ಥಳಗಳಲ್ಲಿ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ (AAI) ವರದಿಯಲ್ಲಿ ದಾಖಲಾಗಿರುವ ಅಂಶಗಳ ಬಗ್ಗೆ ಅಧ್ಯಯನ ಮಾಡಿ ಕಾರ್ಯ ಸಾಧ್ಯತಾ ವರದಿಯನ್ನು ತಯಾರಿಸಲು ಸೂಕ್ತ ಸಮಾಲೋಚಕರನ್ನು ಆಯ್ಕೆ ಮಾಡಲು ಈಗಾಗಲೇ ಟೆಂಡರ್ ಆಹ್ವಾನಿಸಲಾಗಿದೆ. |
| (ಈ) | ಎಚ್‌ಎಎಲ್ ವಿಮಾನ ನಿಲ್ದಾಣವನ್ನು ಮತ್ತೆ ನಾಗರೀಕ ಪ್ರಯಾಣಕ್ಕೆ ತೆರವು ಮಾಡಲಾಗುವುದೇ? (ವಿವರ ನೀಡುವುದು) | ಎಚ್.ಎ.ಎಲ್ ವಿಮಾನ ನಿಲ್ದಾಣವನ್ನು ಮತ್ತೆ ನಾಗರಿಕ ಪ್ರಯಾಣಕ್ಕೆ ತೆರವು ಮಾಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. |

**ಸಂಖ್ಯೆ: ಮೂಅಇ 260 ರಾಅವಿ 2025**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ, ಸಚಿವರು